ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH
ಪತ್ರಿಕಾ ತುಣುಕುಗಳು
PAPER CLIPPINGS
ಇಲಾಖೆ / ವಿಷಯ : DEPARTMENT / SUBJECT:
ಪತ್ರಿಕೆಯ ಹೆಸರು : NAME OF THE NEWS PAPER: ಪ್ರಜಾವಾಣಿ
ದಿನಾಂಕ : DATE : 20/09/2019

### ಐಎಂಎ ವಂಚನೆ ಪ್ರಕರಣ • ಮನ್ಸೂರ್ ಜೊತೆ ಹಣಕಾಸು ವ್ಯವಹಾರ ನಡೆಸಿದ ಆರೋಪ

# ಸಿಬಿಐ ಮುಂದೆ ಹಾಜರಾದ ಜಮೀರ್

ಪ್ರಜಾವಾಣಿ ವಾರ್ತೆ

ಬೆಂಗಳೂರು: 'ಐಎಂಎ ವ್ಯವಸ್ಥಾಪಕ ನಿರ್ದೇಶಕ ಮನ್ಸೂರ್ ಖಾನ್ ಅವರ ಜೊತೆ ಹಣಕಾಸು ವ್ಯವಹಾರ ನಡೆಸಿದ ಆರೋಪಕ್ಕೆ ಒಳಗಾಗಿರುವ ಚಾಮರಾಜಪೇಟೆ ಶಾಸಕ ಜಮೀರ್ ಅಹಮದ್ ಖಾನ್ ಅವರನ್ನು ಸಿಬಿಐ ಅಧಿಕಾರಿಗಳು ಗುರುವಾರ ಸುದೀರ್ಘ ವಿಚಾರಣೆಗೆ ಒಳಪಡಿಸಿದರು.

ಮನ್ಸೂರ್ ಖಾನ್ ಒಡೆತನದ ಕಂಪನಿಯ ವಂಚನೆ ಕುರಿತು ತನಿಖೆ ನಡೆಸುತ್ತಿರುವ ಸಿಬಿಐ ಅಧಿಕಾರಿಗಳು, ಜಮೀರ್ ಅವರಿಗೆ ಹಲವಾರು ಪ್ರಶ್ನೆಗಳನ್ನು ಕೇಳಿದರು. ಕೆಲವು ಪ್ರಶ್ನೆಗಳನ್ನು ಕೇಳಿದಾಗ ಅವರು ಗೊಂದಲಕ್ಕೆ ಒಳಗಾದರು ಎಂದು ಉನ್ನತ ಮೂಲಗಳು ತಿಳಿಸಿವೆ.

ರಿಚ್ಮಂಡ್ ಟೌನ್‌ನ ಸರ್ಪಂಟೈನ್ ರಸ್ತೆಯಲ್ಲಿರುವ ನಿವೇಶನವೊಂದನ್ನು ಜಮೀರ್ ಅಹಮದ್ ಖಾನ್ 2017ರ ಡಿಸೆಂಬರ್‌ನಲ್ಲಿ ಮನ್ಸೂರ್ ಖಾನ್‌ಗೆ ಮಾರಾಟ ಮಾಡಿದ್ದಾರೆ.

'ಈ ವ್ಯವಹಾರ ಅತ್ಯಂತ ಪಾರದರ್ಶಕವಾಗಿದೆ. ಆರ್‌ಟಿಜಿಎಸ್ ಮೂಲಕ ಹಣ ಪಾವತಿಸಲಾಗಿದೆ' ಎಂದೂ ಜಮೀರ್ ತಿಳಿಸಿದ್ದಾರೆ. ಆದರೆ, ತೆರೆಮರೆಯಲ್ಲಿ ಹೆಚ್ಚು ಹಣ ಪಾವತಿಸಲಾಗಿದೆ' ಎಂದು ಮನ್ಸೂರ್ ವಿಚಾರಣೆ ವೇಳೆ ನೀಡಿರುವ ಹೇಳಿಕೆಯಿಂದ ಜಮೀರ್ ಅವರನ್ನು ಸಿಬಿಐ ವಿಚಾರಣೆಗೆ ಒಳಪಡಿಸಿತ್ತು.

ತಾವು ಮನ್ಸೂರ್ ಖಾನ್ ಅವರ ಜತೆ ನಡೆಸಿದ ವ್ಯವಹಾರಕ್ಕೆ ಸಂಬಂಧಿಸಿದ ದಾಖಲೆಗಳನ್ನು ಸಲ್ಲಿಸಲು ಸಿದ್ಧ. ಈಗಾಗಲೇ ಜಾರಿ ನಿರ್ದೇಶನಾಲಯ ತಮ್ಮ ವಿಚಾರಣೆ ನಡೆಸಿದೆ. ಅದಕ್ಕೂ ದಾಖಲೆ ನೀಡಿದ್ದೇನೆ. 2018ರ ವಿಧಾನಸಭೆ ಚುನಾವಣೆ ಸಮಯದಲ್ಲಿ ಚುನಾವಣಾ ಆಯೋಗಕ್ಕೆ ಸಲ್ಲಿಸಿದ ಪ್ರಮಾಣ ಪತ್ರ ಹಾಗೂ ಲೋಕಾಯುಕ್ತ ಸಲ್ಲಿಸಿರುವ ಆಸ್ತಿ ವಿವರದಲ್ಲೂ ನಿವೇಶನ ಮಾರಾಟ ಕುರಿತು ಪ್ರಸ್ತಾಪಿಸಿದ್ದೇನೆ ಎಂದು ಅವರು ಸ್ಪಷ್ಟಪಡಿಸಿದ್ದಾರೆ.

ಜಮೀರ್‌ಗೆ ಮನ್ಸೂರ್ ಅಕ್ರಮವಾಗಿ ಹಣ ನೀಡಿದ್ದಾರೆಯೇ ಎಂಬ ಬಗ್ಗೆ ಸಿಬಿಐ ತನಿಖೆ ನಡೆಸುತ್ತಿದೆ.

## ಪಾಲಿಕೆ ಮಾಜಿ ಸದಸ್ಯ ಸಯೀದ್ ಜಾಮೀನಿಗೆ ವಿರೋಧ

ಬೆಂಗಳೂರು ಮಹಾನಗರಪಾಲಿಕೆ ಮಾಜಿ ಸದಸ್ಯ ಸಯೀದ್ ಮುಜಾಹಿದ್ ಅವರಿಗೆ ಜಾಮೀನು ನೀಡುವುದಕ್ಕೆ ಸಿಬಿಐ ತೀವ್ರ ಆಕ್ಷೇಪ ವ್ಯಕ್ತಪಡಿಸಿದೆ.

ಐಎಂಎ ವಂಚನೆ ಪ್ರಕರಣದಲ್ಲಿ ಸಯೀದ್ ಮುಜಾಹಿದ್ ಪ್ರಮುಖ ಪಾತ್ರ ವಹಿಸಿದ್ದಾರೆ. ಅವರೇ ಮನ್ಸೂರ್ ಖಾನ್ ಅವರಿಗೆ ಹಲವು ರಾಜಕಾರಣಿಗಳನ್ನು ಪರಿಚಯಿಸಿದ್ದಾರೆ ಎಂದು ಸಿಬಿಐ ವಕೀಲ ಪಿ. ಪ್ರಸನ್ನ ಕುಮಾರ್ ಅವರು ಕೆ.ಎನ್. ಫಣೀಂದ್ರ ಅವರ ಏಕ ಸದಸ್ಯ ನ್ಯಾಯಪೀಠಕ್ಕೆ ಮನವಿ ಮಾಡಿದರು.

ಸಯೀದ್ ಅವರೇ ಜಮೀರ್ ಅಹಮದ್ ಹಾಗೂ ಮನ್ಸೂರ್ ಖಾನ್ ನಡುವಿನ ಕೆಲವು ವ್ಯವಹಾರಗಳಿಗೆ ಮಧ್ಯವರ್ತಿ ಆಗಿದ್ದಾರೆ. ಅವರಿಗೆ ಜಾಮೀನು ನೀಡಿದರೆ ಪ್ರಕರಣದ ತನಿಖೆಗೆ ತೊಂದರೆ ಆಗಲಿದೆ ಎಂದೂ ಪ್ರಸನ್ನಕುಮಾರ್ ವಾದಿಸಿದರು.

ಬಹುಕೋಟಿ ಹಗರಣದ ಮತ್ತೊಬ್ಬ ಆರೋಪಿ ಮುಜಾಹಿದ್ದೀನ್ ಐಎಂಎ ಸಮೂಹ ಕಂಪನಿಗಳ ನಿರ್ದೇಶಕರಾಗಿದ್ದಾರೆ. ಸರ್ಕಾರದ ಕೆಲವು ಅಧಿಕಾರಿಗಳಿಗೆ ಅವರು ಹಣ ವರ್ಗಾವಣೆ ಮಾಡಿದ್ದಾರೆ. ಕಸ್ಟಡಿಯಲ್ಲಿರುವ ಇನ್ನೂ ಅನೇಕರು ಅಕ್ರಮ ವ್ಯವಹಾರಗಳಲ್ಲಿ ಭಾಗಿಯಾಗಿದ್ದಾರೆ ಎಂದು ಪ್ರಸನ್ನ ಕುಮಾರ್ ಸ್ಪಷ್ಟಪಡಿಸಿದರು.

ಈಗಾಗಲೇ ಪ್ರಕರಣದ ತನಿಖೆ ನಡೆಸಿರುವ ಎಸ್ಐಟಿ ಆರೋಪಿಗಳ ವಿಚಾರಣೆ ಪೂರ್ಣಗೊಳಿಸಿದೆ. ಸಿಬಿಐ ಕೂಡಾ ದೋಷಾರೋಪ ಪಟ್ಟಿ ಸಲ್ಲಿಸಿದೆ. ಹೀಗಾಗಿ, ಆರೋಪಿಗಳಿಗೆ ಷರತ್ತಿನ ಜಾಮೀನು ನೀಡಬಹುದು ಎಂದು ಅವರ ಪರ ವಕೀಲರು ವಾದಿಸಿದರು. ಎರಡೂ ಕಡೆ ವಾದ ಆಲಿಸಿದ ಪೀಠ ತೀರ್ಪನ್ನು ಕಾಯ್ದಿರಿಸಿತು